



ಅರುಣ ಪಿ. ಭಟ್ಟ

## ವಾರಭವಿಷ್ಯ: 23.01.2025ರಿಂದ 29.01.2025ರವರೆಗೆ





ಈ ವಾರದ ಆರಂಭದಲ್ಲೇ ಸಂಬಂಧಿಕರ ಭೇಟಿಗೆ ನಿಶ್ಚಯ ಮಾಡುವ ಸಾಧ್ಯತೆ ಇದೆ. ಇನ್ನು ಉದ್ಯೋಗಸ್ಥರಿಗೆ ತಾತ್ಕಾಲಿಕ ವರ್ಗಾವಣೆ ಸಾಧ್ಯತೆ ಇದೆ. ವಾರದ ಮಧ್ಯಭಾಗದಲ್ಲಿ ಕೌಟುಂಬಿಕ ಜೀವನ ಸಂತೋಷವಾಗಿರುತ್ತದೆ. ಸಂಗಾತಿ ಮಕ್ಕಳ ಜೊತೆಗಿನ ಬಾಂಧವ್ಯ ಉತ್ತಮವಾಗಿರುತ್ತದೆ. ಅವರಿಗೆ ಕೆಲವು ಜವಾಬ್ದಾರಿಗಳನ್ನು ವಹಿಸುತ್ತೀರಿ. ವ್ಯಾಪಾರದಲ್ಲಿ ಉತ್ತಮ ಪ್ರಗತಿ ಇದೆ. ಶುಭದಿನ: **24.** ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.

---




ಈ ವಾರದ ಶುರುವಿನಲ್ಲೇ ಆದಾಯ ಹೆಚ್ಚಿಸಿಕೊಳ್ಳುವಲ್ಲಿ ಯಶಸ್ವಿಯಾಗುತ್ತೀರಿ. ಉದ್ಯೋಗಸ್ಥರು ಹಿಂದೆಂದಿಗಿಂತ ಹೆಚ್ಚು ಚಟುವಟಿಕೆಯಿಂದ ಕೆಲಸ ಮಾಡುತ್ತೀರಿ. ವರ್ಚಸ್ಸು, ಸ್ಥಾನಮಾನ ಕೂಡ ಇದೇ ಅವಧಿಯಲ್ಲಿ ಹೆಚ್ಚಾಗಲಿದೆ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ವೈಯಕ್ತಿಕ ಜೀವನದಲ್ಲಿ ಸಣ್ಣ ಪುಟ್ಟ ವಿಷಯಗಳಿಗೂ ಭಿನ್ನಾಭಿಪ್ರಾಯ ತಲೆದೋರಲಿದೆ. ಶುಭದಿನ: **25.** ಹನುಮಾನ್ ಚಾಲೀಸ್ ಪಠಿಸಿರಿ.

---




ಉದ್ಯಮಿಗಳಿಗೆ ಉತ್ತಮವಾದ ಸಮಯ ಇದು. ಇದರಿಂದ ನಿಮಗೆ ಸಮಾಧಾನ ಸಂತೋಷ ಉಂಟಾಗುತ್ತದೆ. ನೀವು ಅಂದುಕೊಂಡ ಹಲವು ಕೆಲಸಗಳು ಪೂರ್ಣಗೊಳ್ಳುತ್ತವೆ. ಉದ್ಯೋಗಸ್ಥರಿಗೆ ಮಾಡುವ ಕೆಲಸದಲ್ಲಿ ಗುಣಮಟ್ಟದ ವೇಗ ಕಂಡುಕೊಳ್ಳಲು ಸಹಕಾರಿ ಆಗುತ್ತದೆ. ಸಾಮಾಜಿಕ ಸ್ಥಾನಮಾನವು ಹೆಚ್ಚಾಗಲಿದೆ. ವಾರದ ಅಂತ್ಯಕ್ಕೆ ಆರೋಗ್ಯದಲ್ಲಿ ಏರಿಳಿತ. ಶುಭದಿನ: **27.** ಗಣಪತಿಗೆ ದೂರ್ವಾರ್ಚನೆ ಮಾಡಿರಿ.

---





ಸಾಹಿತ್ಯ ಹಾಗೂ ಸಿನಿಮಾ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಹಲವು ಅವಕಾಶಗಳು ಒಟ್ಟೊಟ್ಟಿಗೆ ಬರಲಿವೆ. ಬಡ್ತಿ ಸಿಗುವ ಸಾಧ್ಯತೆಯೂ ಇದೆ. ಆರೋಗ್ಯ ಬಗ್ಗೆ ನಿರ್ಲಕ್ಷ್ಯ ಮಾಡದೇ ಕಡ್ಡಾಯವಾಗಿ ವೈದ್ಯರಿಂದ ಚಿಕಿತ್ಸೆ ಪಡೆದುಕೊಳ್ಳಿ. ಸ್ವಯಂ ವೈದ್ಯ ಯಾವ ಕಾರಣಕ್ಕೂ ಬೇಡ. ಮುಂಬರುವ ದಿನಗಳಲ್ಲಿ ಹಲವು ಸಕಾರಾತ್ಮಕ ಅವಕಾಶಗಳು ಹುಡುಕಿಕೊಂಡು ಬರಲಿವೆ. ಶುಭದಿನ: **28.** ಶಿವಕವಚ ಪಠಣ ಮಾಡಿರಿ.

---





ವಾರದ ಶುರುವಿನಿಂದಲೇ ಕೆಲಸಗಳನ್ನು ಪೂರೈಸಲು ಬಹಳ ಶ್ರಮ ಹಾಕುತ್ತೀರಿ. ಯಾರನ್ನೂ ಸುಮ್ಮನೆ ನಂಬುವುದು ಒಳ್ಳೆಯದಲ್ಲ. ವಂಚಕರ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಕೈಕೊಡುವ ಸಾಧ್ಯತೆ ಇದೆ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆ ಇದೆ. ಈ ವಾರದಲ್ಲಿ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರಲಿವೆ. ಶುಭದಿನ: **27.** ಲಿಂಗಾಷ್ಟಕ ಪಠಿಸಿರಿ.

---




ವಾರದ ಆರಂಭದಿಂದಲೇ ವ್ಯವಹಾರದಲ್ಲಿ ಕನಸನ್ನು ಈಡೇರಿಸಿಕೊಳ್ಳಲು ಶ್ರಮ ಹಾಕುತ್ತೀರಿ. ಭೂಮಿ ಖರೀದಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಹಲವು ಅವಕಾಶಗಳು ನಿಮಗೆ ದೊರೆಯುತ್ತವೆ. ಧಾರ್ಮಿಕ ಕೆಲಸ ಕಾರ್ಯಗಳಲ್ಲಿ ಹಿನ್ನಡೆ ಅನುಭವಿಸಬೇಕಾಗುತ್ತದೆ. ನಿಮ್ಮ ವರ್ಚಸ್ಸು ಹಾಳು ಮಾಡಲು ವಿರೋಧಿಗಳು ಬಹಳ ಪ್ರಯತ್ನಪಡುತ್ತಾರೆ. ಈ ಬಗ್ಗೆ ಎಚ್ಚರಿಕೆ ಇರಲಿ. ಶುಭದಿನ **26.** ಚಂಡಿ ಪಾರಾಯಣ ಮಾಡಿರಿ.

---





ಕೌಟುಂಬಿಕ ವಿಚಾರದಲ್ಲಿ ವಾರದ ಶುರುವಿನಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಹಣಕಾಸಿಗೆ ಕೊರತೆ ಇರುವುದಿಲ್ಲ. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ವಾರದ ಮಧ್ಯದಲ್ಲಿ ಮನೆಗೆ ಸಂಬಂಧಿಸಿದ ವಿಷಯಗಳು ಪ್ರಾಮುಖ್ಯ ಪಡೆಯುತ್ತವೆ. ನೀವು ಹಾಕಿದ ಶ್ರಮಕ್ಕೆ ಉತ್ತಮ ಫಲಿತಾಂಶ ಸಿಗಲು ಶುರುವಾಗುತ್ತದೆ. ಶುಭದಿನ **24.** ಸೌಂದರ್ಯ ಲಹರಿ ಪಠಿಸಿರಿ.

---





ಶೈಕ್ಷಣಿಕ ರಂಗದಲ್ಲಿ ಕಾರ್ಯ ನಿರ್ವಹಿಸುವವರಿಗೆ ವಾರದ ಆರಂಭದಲ್ಲಿ ಅದ್ಭುತವಾದ ಯಶಸ್ಸು ದೊರೆಯುವ ಅವಕಾಶಗಳಿವೆ. ಕ್ರೀಡೆ, ಸಿನಿಮಾ ಸಂಗೀತ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಗೌರವಯುತವಾದ ಸ್ಥಾನಮಾನ ದೊರೆಯಲಿದೆ. ಹಲವು ಘಟನೆಗಳು ನೀವು ಅಂದುಕೊಂಡ ದಿಕ್ಕಿನ ಕಡೆಗೆ ಸಾಗುವುದರಿಂದ ಬಹಳ ಸಂತೋಷಗೊಳ್ಳುವಿರಿ. ಶುಭದಿನ **29.** ವೆಂಕಟೇಶ್ವರ ಸ್ತೋತ್ರ ಪಠಿಸಿರಿ.

---





ಉದ್ಯೋಗಸ್ಥರಿಗೆ ತಮ್ಮ ಗೌರವ, ಸ್ಥಾನ ಉಳಿಸಿಕೊಳ್ಳುವುದು ಮುಖ್ಯವಾಗುತ್ತದೆ. ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಸಂತಾನ ನಿರೀಕ್ಷೆಯಲ್ಲಿ ಇರುವ ದಂಪತಿಗೆ ಶುಭ ಸುದ್ದಿ. ಸಂಗಾತಿ ಜೊತೆಗೆ ಇಷ್ಟದ ಪ್ರದೇಶಗಳಿಗೆ ಪ್ರಯಾಣಕ್ಕೆ ತೆರಳುವಿರಿ. ವಾರದ ಅಂತ್ಯಕ್ಕೆ ಸರಿಯುತ್ತಾ ನಿಮ್ಮ ಹಳೇ ಸಮಸ್ಯೆಗಳು ಮರುಕಳಿಸುವ ಸಾಧ್ಯತೆ ಇದೆ. ಶುಭದಿನ: **28.** ಕಾಲಭೈರವನ ಸೇವೆ ಮಾಡಿರಿ.

---





ನಿಮ್ಮ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ವಾರದ ಆರಂಭದಲ್ಲಿ ಉತ್ತಮವಾದ ಅವಕಾಶ ದೊರೆಯಲಿದೆ. ಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯುತ್ತದೆ. ವಾರದ ಮಧ್ಯ ಭಾಗದಲ್ಲಿ ಬಡ್ತಿ ದೊರೆಯುವ ಅವಕಾಶಗಳಿವೆ. ನೀವು ಕಾರ್ಯ ನಿರ್ವಹಿಸುತ್ತಿರುವ ಇಲಾಖೆಯಲ್ಲಿ ಜವಾಬ್ದಾರಿ ಹೆಚ್ಚಾಗುವ ಅವಕಾಶ ಇದೆ. ನಿಮ್ಮ ಕೌಶಲವನ್ನು ಹೆಚ್ಚಿಸಿಕೊಳ್ಳಲು ಶ್ರಮ ಹಾಕಿ. ಶುಭದಿನ: **27.** ವಿಷ್ಣು ಸಹಸ್ರನಾಮ ಮಾಡಿ.

---




ವಾರದ ಶುರುವಿನಲ್ಲಿ ಕೌಟುಂಬಿಕ ವಿಚಾರಗಳಿಗಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಕೆಲಸ ಮಾಡುವ ನಿಮ್ಮ ಸಾಮರ್ಥ್ಯ ಹೆಚ್ಚಾಗುತ್ತಾ ಸಾಗುತ್ತದೆ. ಕುಟುಂಬದವರ ಜೊತೆಗೆ ಉತ್ತಮ ಬಾಂಧವ್ಯ ಏರ್ಪಡುತ್ತದೆ. ಆದರೆ ತಾಯಿಯ ಆರೋಗ್ಯ ಸಮಸ್ಯೆಯಾಗಿ ಬೇಸರಕ್ಕೆ ಕಾರಣವಾಗಬಹುದು. ಆರೋಗ್ಯ ಸಮಸ್ಯೆಗಳು ಕೂಡ ನಿವಾರಣೆ ಆಗುತ್ತವೆ. ಶುಭದಿನ **28.** ಗಣೇಶ ಪಂಚರತ್ನ ಸ್ತೋತ್ರ ಪಠಿಸಿರಿ.

---




ವಾರದ ಆರಂಭದಲ್ಲಿ ವ್ಯವಹಾರ ಉದ್ಯಮದ ವಿಸ್ತರಣೆ ಬಗ್ಗೆ ಆಲೋಚನೆ ಮಾಡುತ್ತೀರಿ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಆರೋಗ್ಯ ಕೂಡ ಉತ್ತಮವಾಗಿ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ವಿಚಾರವಾಗಿಯೇ ಪ್ರಯಾಣ ಮಾಡಬೇಕಾಗುತ್ತದೆ. ಹೀಗೆ ಸುತ್ತಾಟ ಮಾಡಿ ಬಂದ ನಂತರ ಆರೋಗ್ಯದಲ್ಲಿ ಏರುಪೇರು ಕಾಣಿಸಿಕೊಳ್ಳುತ್ತದೆ. ಶುಭದಿನ **25.** ಲಕ್ಷ್ಮೀನರಸಿಂಹ ಸ್ತೋತ್ರ ಪಠಿಸಿರಿ.